EMAIL : dairyadadaari@gmail.com ಸಂಪುಟ: 01 ಸಂಚಿಕೆ: 163
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಶನಿವಾರ: 06–06–2026

## ಹೊಸ ಪಕ್ಷ ಘೋಷಿಸಿದ ಅಣ್ಣಾಮಲೈ

**ಚೆನ್ನೈ,ಜೂ.5–** ಬಿಜೆಪಿಗೆ ರಾಜೀನಾಮೆ ನೀಡಿರುವ ನಿವೃತ್ತ ಐಪಿಎಸ್ ಅಧಿಕಾರಿ ಕೆ. ಅಣ್ಣಾಮಲೈ ಹೊಸ ರಾಜಕೀಯ ಪಕ್ಷ ಘೋಷಣೆ ಮಾಡಿದ್ದಾರೆ. ಈ ನೂತನ ಪಕ್ಷಕ" ನಾವು ಜನರು" ಎಂಬ ಹೆಸರನ್ನು ನಾಮಕರಣ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

"ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ಕೆ. ಅಣ್ಣಾಮಲೈ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ಸಲ್ಲಿಸಿದ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ"

ಅಣ್ಣ ಮಲೈ ಅವರು ಪಕ್ಷಕ್ಕೆ ರಾಜೀನಾಮೆ ನೀಡಿರುವುದರಿಂದ ಪಕ್ಷಕ್ಕೆ ಯಾವುದೇ ನಷ್ಟ ಆಗುವುದಿಲ್ಲ ,ಕಾರ್ಯಕರ್ತರಿದ್ದಾರೆ ಎಂದು ಬಿಜೆಪಿ ಹೇಳಿಕೆಯಲ್ಲಿ ತಿಳಿಸಿದೆ

ಪಕ್ಷದ ಮಾಜಿ ರಾಜ್ಯಾಧ್ಯಕ್ಷ ಕೆ. ಅಣ್ಣಾ ಮಲೈ ನೀಡಿರುವ ರಾಜೀನಾಮೆಯನ್ನು ಬಿಜೆಪಿ ಅಂಗೀಕಾರ ಮಾಡಿದೆ. ತಮಿಳುನಾಡಿನಲ್ಲಿ ಬಿಜೆಪಿಯ ನಾಯಕ ಕೆ ಅಣ್ಣಾಮಲೈ ಅವರು ಬಿಜೆಪಿಯನ್ನು ತೊರೆದಿರುವುದು ಹಲವು ದಿನಗಳ ನಡೆಯುತ್ತಿದ್ದ ಸಸ್ಪೆನ್ಸ್ ಕೊನೆಗೊಂಡಿದೆ.

41 ವರ್ಷದ ನಾಯಕ ಅಣ್ಣಾ ಮಲೈ ಪಕ್ಷದ ಮುಖ್ಯಸ್ಥ ನಿತಿನ್ ನಬಿನ್ ಅವರನ್ನು ಭೇಟಿಯಾಗಿ, ರಾಜೀನಾಮೆ ನೀಡುವ ವಿಷಯ



ತಿಳಿಸಿದ್ದರು." ನಂತರ ಅಮಿತ್ ಶಾ ಅವರನ್ನು ಅಣ್ಣಾಮಲೈ ಅವರ ಪ್ರತಿಭೆಯನ್ನು ಗುರುತಿಸಿದ ಕೀರ್ತಿಗೆ ಪಾತ್ರರಾದ ಬಿ.ಎಲ್. ಸಂತೋಷ್ ಅವರೊಂದಿಗೆ ಸಭೆ ನಡೆಸಿದ ನಂತರ ರಾಜೀನಾಮೆ ಸಲ್ಲಿಸಿದ್ದರು.

ತಮಿಳುನಾಡು ಬಿಜೆಪಿ ಮುಖ್ಯಸ್ಥ ನೈನಾರ್ ನಾಗೇಂದ್ರನ್ ಅವರನ್ನು ದೆಹಲಿಗೆ ಕರೆಸಿಕೊಂಡು ಮತ್ತೊಂದು ಸುತ್ತಿನ ಮಾತುಕತೆ ನಡೆಸಲಾಗಿತ್ತು. ಅದರೂ ಅಣ್ಣಾ ಮಲೈ ತಮ್ಮ ನಿಲುವಿನಿಂದ ಹಿಂದೆ ಸರಿಯದ ಕಾರಣ ರಾಜೀನಾಮೆಯನ್ನು ಅಂಗೀಕಾರ ಮಾಡಿದೆ.

ತಮಿಳುನಾಡು ಬಿಜೆಪಿ ಮುಖ್ಯಸ್ಥ ನೈನಾರ್ ನಾಗೇಂದ್ರನ್ ಪ್ರತಿಕ್ರಿಯಿಸಿ ಅಣ್ಣಾಮಲೈ ಅವರ ರಾಜೀನಾಮೆ ಪಕ್ಷಕ್ಕೆ "ಯಾವುದೇ ನಷ್ಟವಿಲ್ಲ" ಎಂದು ಘೋಷಿಸಿದ್ದಾರೆ.

ತಮಿಳುನಾಡಿನಲ್ಲಿ ಹೊಸ ರಾಜಕೀಯ ಪಕ್ಷ ಘೋಷಣೆ ಮಾಡಲು ಸಿದ್ದತೆ ನಡೆಸಿದ್ದು ಮುಂಬರುವ ವಿಧಾನಸಭೆ ಉಪ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಉದ್ದೇಶಿಸಿದ್ದಾರೆ.

ತಮಿಳುನಾಡು ಬಿಜೆಪಿ ಘಟಕದಲ್ಲಿ ಕಡೆಗಣಿಸಲ್ಪಟ್ಟಿದ್ದ ಕೆ. ಅಣ್ಣಾ ಮಲೈ ಬಿಜೆಪಿ ಪಕ್ಷಕ್ಕೆ ರಾಜೀನಾಮೆ ನೀಡಿ ಹೊರ ಬಂದಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಸಾರ್ವಜನಿಕರನ್ನು ಉದ್ದೇಶಿಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವುದಾಗಿ ಮತ್ತು ತಮ್ಮ ಮುಂದಿನ ಕ್ರಮದ ಬಗ್ಗೆ ಚರ್ಚಿಸುವುದಾಗಿ ಅವರು ಹೇಳಿದ್ದಾರೆ

ಅಣ್ಣಾ ಮಲೈ ರಾಜೀನಾಮೆ ಅವರ ರಾಜಕೀಯ ಯೋಜನೆಗಳ ಬಗ್ಗೆ ಊಹಾಪೋಹಗಳಿಗೆ ನಾಂದಿ ಹಾಡಿತು,ಅವರು ಪಕ್ಷ ತೊರೆಯಲು ಸಿದ್ಧತೆ ನಡೆಸುತ್ತಿದ್ದಾರೆ ಎಂಬ ವರದಿಗಳನ್ನು ಬಿಜೆಪಿ ನಾಯಕರು ಈ ಹಿಂದೆ ತಳ್ಳಿಹಾಕಿದ್ದರು. ಪಕ್ಷದ ನಾಯಕರು ಅವರನ್ನು ಬಿಜೆಪಿಯಲ್ಲಿ ಮುಂದುವರಿಯುವಂತೆ ಒತ್ತಾಯಿಸಿದ್ದರು. ಯಾರ ಮಾತಿಗೂ ಮಣೆ ಹಾಕದೆ ರಾಜೀನಾಮೆ ನೀಡಿದ್ದಾರೆ.

## ಸಿರವಾರ: ವಿದ್ಯುತ್ ಬಿಲ್ ಬಾಕಿ ವಸೂಲಾತಿಗೆ ವಿಶೇಷ ಅಭಿಯಾನ; ಗ್ರಾಹಕರು ಸಹಕರಿಸಲು ಜೆಸ್ಕಾಂ ಮನವಿ

ಸಿರವಾರ: ಜೆಸ್ಕಾಂ ಸಿರವಾರ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಗ್ರಾಹಕರಿಗೆ ಸಿರವಾರ ಜೆಸ್ಕಾಂ ಕಚೇರಿಯಿಂದ ಪ್ರಕಟಣೆ ಹೊರಡಿಸಲಾಗಿದ್ದು, ಬಾಕಿ ಇರುವ ವಿದ್ಯುತ್ ಬಿಲ್ ಪಾವತಿಸಲು ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.ವಿದ್ಯುತ್ ಬಿಲ್ ಬಾಕಿ ವಸೂಲಾತಿಗಾಗಿ ಎರಡು ಹಂತಗಳಲ್ಲಿ ವಿಶೇಷ ಅಭಿಯಾನಗಳನ್ನು ಆಯೋಜಿಸಲಾಗಿದೆ: **ಪ್ರಥಮ ಹಂತ:** ಜೂನ್ 5, 2026 ರಿಂದ ಜೂನ್ 15, 2026 ರವರೆಗೆ.

**ದ್ವಿತೀಯ ಹಂತ:** ಜೂನ್ 16, 2026 ರಿಂದ ಜೂನ್ 30, 2026 ರವರೆಗೆ. ಸಿರಿವಾರ, ಮಲ್ಲಟ ಹಾಗೂ ಕವಿತಾಳ ಶಾಖೆಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಹಕರು ಈ ವಿಶೇಷ ಅಭಿಯಾನದ ಪ್ರಯೋಜನ ಪಡೆದು, ತಮ್ಮ ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತವನ್ನು ಕೂಡಲೇ ಪಾವತಿಸಲು ಕೋರಲಾಗಿದೆ.

**ಪಾವತಿ ವಿಧಾನಗಳು:** ಗ್ರಾಹಕರು ಜೆಸ್ಕಾಂನ ಅಧಿಕೃತ ವೆಬ್‌ಸೈಟ್ https://gescom.karnataka.gov.in ಮೂಲಕ ಅಥವಾ PhonePe, Google Pay ನಂತಹ ಡಿಜಿಟಲ್ ಪಾವತಿ ವೇದಿಕೆಗಳನ್ನು ಬಳಸಿಕೊಂಡು ಸುಲಭವಾಗಿ ತಮ್ಮ ಬಿಲ್ ಪಾವತಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ಯಾವುದೇ ಗೊಂದಲಗಳಿದ್ದಲ್ಲಿ ಸ್ಥಳೀಯ ಜೆಸ್ಕಾಂ ಶಾಖಾ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸರ್ವೋದಯ ಸಿಬಿಎಸ್‌ಇ ಶಾಲೆಯಿಂದ ವಿಶ್ವ ಪರಿಸರ ದಿನಾಚರಣೆ: ಪೊಲೀಸ್ ಠಾಣೆ, ತಹಸೀಲ್ದಾರ್ ಕಚೇರಿಗೆ ವಿದ್ಯಾರ್ಥಿಗಳ ಭೇಟಿ




ಧೈರ್ಯದ ದಾರಿ

**ಮಾನ್ವಿ, ಜೂ. 5:** ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಮಾನ್ವಿಯ ಸರ್ವೋದಯ ಸಿಬಿಎಸ್‌ಇ ಶಾಲೆ ವತಿಯಿಂದ ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆಯ ಮಹತ್ವವನ್ನು ತಿಳಿಸುವ ಉದ್ದೇಶದಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಂಗವಾಗಿ ಶಾಲೆಯ ವಿದ್ಯಾರ್ಥಿಗಳು, ಪ್ರಾಚಾರ್ಯರು ಹಾಗೂ ಶಿಕ್ಷಕರು ಮಾನ್ವಿ ಪೊಲೀಸ್ ಠಾಣೆ ಮತ್ತು ತಹಸೀಲ್ದಾರ್ ಕಚೇರಿಗೆ ಭೇಟಿ ನೀಡಿ ಪರಿಸರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು. ಈ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ, ಮರಗಳ ಮಹತ್ವ ಹಾಗೂ ಹಸಿರು ವಾತಾವರಣ ನಿರ್ಮಾಣದ ಕುರಿತು ಜಾಗೃತಿ ಮೂಡಿಸಲಾಯಿತು.

ಮಾನ್ವಿ ಪೊಲೀಸ್ ಠಾಣೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಿಐ ಸೋಮಶೇಖರ್ ಎಸ್. ಕೆಂಚರೆಡ್ಡಿ ಅವರು ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆಯ ಅಗತ್ಯತೆ ಕುರಿತು ತಿಳಿಸಿ, ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ನೆಟ್ಟು ಅದರ ಪೋಷಣೆ ಮಾಡುವ ಮೂಲಕ ಪರಿಸರ ಉಳಿವಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ತಹಸೀಲ್ದಾರ್ ಕಚೇರಿಯಲ್ಲಿ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಅವರ ಸಮ್ಮುಖದಲ್ಲಿ ಪರಿಸರ




ದಿನಾಚರಣೆಯನ್ನು ಆಚರಿಸಲಾಯಿತು. ಪರಿಸರ ರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದಾಗಿದ್ದು, ಭವಿಷ್ಯದ ಪೀಳಿಗೆಗಾಗಿ ಪ್ರಕೃತಿಯನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಚಾರ್ಯ ಜೋಸೆಫ್ ಎಸ್. ಬೈಲಾ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಪರಿಸರ ಸಂರಕ್ಷಣೆಯ ಪ್ರತಿಜ್ಞೆ ಸ್ವೀಕರಿಸಿದರು. ವಿದ್ಯಾರ್ಥಿಗಳು ಹಸಿರು ಪರಿಸರ ನಿರ್ಮಾಣದ ಸಂದೇಶ ಸಾರುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ವಿಶ್ವ ಪರಿಸರ ದಿನಾಚರಣೆ

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ನ್ಯಾ. ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ.



ಧೈರ್ಯದ ದಾರಿ

**ರಾಯಚೂರು ಜೂನ್ 05:** ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಮರ ಗಿಡಗಳನ್ನು ಕಡಿಯುವ ಮೂಲಕ ನಮ್ಮ ಉತ್ತಮ ಪರಿಸರ ಹಾಳು ಮಾಡುತ್ತಿದ್ದು, ನಾವೆಲ್ಲರೂ ಎಚ್ಚೆತ್ತುಕೊಳ್ಳದಿದ್ದರೆ ಈಗಾಗಲೇ ಅಲ್ಲಲಿ ಸಂಭವಿಸುತ್ತಿರವ ಪ್ರಕೃತಿಯ ವಿಕೋಪದ ಜತೆಗೆ ಮತ್ತಷ್ಟು ಘೋರ ವಿಕೋಪಗಳನ್ನು ನಾವು ಎದುರಿಸಬೇಕಾಗುತ್ತದೆ ಎಂದು ರಾಯಚೂರಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ. ಅವರು ಹೇಳಿದರು.

ಜೂನ್ 05ರ ಶುಕ್ರವಾರ ದಂದು ನಗರದ ನೂತನ ನ್ಯಾಯಾಲಯ ಕಟ್ಟಡದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ 2ನೇಪುಟಕ್ಕೆ

## ಬ್ಲಾಕ್ ಕಾಂಗ್ರೇಸ್ ವತಿಯಿಂದ ಮಾಜಿ ಸಚಿವ ಎನ್.ಎಸ್.ಬೋಸರಾಜು ಜನ್ಮದಿನ ಆಚರಣೆ

ಧೈರ್ಯದ ದಾರಿ



**ಮಾನ್ವಿ :** ಪಟ್ಟಣದ ಸಾರ್ವಜನಿಕ ಸರಕಾರಿ ಆಸ್ಪತ್ರೆ ಹಾಗೂ ತಾಯಿ ಮಕ್ಕಳ ಆಸ್ಪತ್ರೆಯಲ್ಲಿನ ರೋಗಿಗಳಿಗೆ ಮಾನ್ವಿ ಬ್ಲಾಕ್ ಕಾಂಗ್ರೇಸ್ ವತಿಯಿಂದ ಹಣ್ಣುಗಳನ್ನು ವಿತರಿಸುವ ಮೂಲಕ ವಿಧಾನಪರಿಷತ್ತಿನ ಸದಸ್ಯರು ಹಾಗೂ ಮಾಜಿ ಸಚಿವರಾದ ಎನ್.ಎಸ್.ಬೋಸರಾಜು ರವರ ಹುಟ್ಟುಹಬ್ಬವನ್ನು ಅತ್ಯಂತ ಸರಳವಾಗಿ ಆಚರಿಸಲಾಯಿತು.

ಬ್ಲಾಕ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರೌಡ್ರು ಮಹಾಂತೇಶ್ ಸ್ವಾಮಿ, ಮಾಜಿ ಎ.ಪಿ.ಎಂ.ಸಿ.ಸದಸ್ಯರಾದ ಶಿವರಾಜ್ ನಾಯಕ್ ವಕೀಲರು, ಮುಖಂಡರಾದ ಸೈಯದ್ ಖಾಲಿದ್ ಖಾದ್ರಿ, ಜಿ.ನಾಗರಾಜ್, ಹೊನ್ನಪ್ಪ ಹೆಳವಾರ್, ಹುಸೇನ್ ಪಾಶ ಕೊಡ್ಲಿ, ಚಂದ್ರಶೇಖರ್ ಕುರುಡಿ, ವಸಂತ್ ಕೊಡ್ಲಿ, ಶೇಕ್ ಜಮೀಲ ಅಹಮದ್, ರೇವಣಸಿದ್ದಯ್ಯ ಸ್ವಾಮಿ, ಚಾಂದ್ ಪಾಷಾ ಗುತ್ತೇದಾರ್, ಜಿಲಾನಿ ಖುರೇಶಿ, ಡಿ ವೀರೇಶ್, ಸತ್ತರ್ ಬಂಗ್ಲೆವಾಲೆ, ಸೂರ್ಯನಾರಾಯಣ ಯಾದವ್, ಆದ್ಯಪ್ಪ ಗೌಡ, ನಾನೀ, ಬೀರಪ್ಪ ಬಲಟ್ಟಗಿ, ಶಿವು ಮಾಂತೇಶ ನಕ್ಕುಂದಿ, ಹಾಜಿಮಿಯ ಬುರಾನ್‌ಪುರ್,ಯಲ್ಲಪ್ಪ ಕೊಟ್ನೆಕಲ್, ಆಂಜನೇಯ,ಹಂಪಯ್ಯ ನಾಯಕ್, ಕಾಮೇಶ್ ಇನ್ನಿತರರು ಇದ್ದರು.

## ಡಾ ಎಸ್ .ಪಿ .ಬಿ .ಗಾನಗಳ ಗಾರುಡಗ . ಡಾ .ಬಿರಾದಾರ



ಧೈರ್ಯದ ದಾರಿ

**ರಾಯಚೂರು:** ಭಾರತೀಯ ಚಲನಚಿತ್ರ ರಂಗದ ಹಿನ್ನೆಲೆ ಗಾಯಕರು ಪ್ರಸಿದ್ಧ ರಾಧವರು. ಸಾವಿರಾರು ಗೀತೆಗಳನ್ನ ಹಾಡಿ ಬಹುಭಾಷೆಗಳ ಹಿನ್ನೆಲೆ ಗಾಯಕ ಎಸ್ ಪಿ ಬಿ ಅಂದರೆ ಡಾ. ಎಸ್.ಪಿ ಬಾಲಸುಬ್ರಮಣ್ಯಂ .ಇವರು 1946 ಜೂನ್ 4 ರಂದು ನೆಲ್ಲೂರಿನಲ್ಲಿ ಜನಸಿದರು. ಬಾಲ್ಯದಿಂದಲೂ ಬಹಳ ಕ್ರಿಯಾಶೀಲ ಮತ್ತು ವಿಶೇಷವಾಗಿ ಸಂಗೀತಕ್ಕೆ ಆಸಕ್ತಿಯನ್ನು ಹೊಂದಿದ್ದರು.

ಪ್ರಾರಂಭದಲ್ಲಿ ಶಾಸ್ತ್ರೀಯ ಸಂಗೀತವನ್ನು ಕಲಿತು ನಂತರ ಭಾಷೆಗಳ ಚಲನಚಿತ್ರ ಹಲವು ನಾಯಕರಿಗೆ ಹಿನ್ನೆಲೆ ಗಾಯನವನ್ನು ಅವರ ಧ್ವನಿ ಹಾಗೆ. ಹಾಡಿ ಪ್ರಸಿದ್ಧಿಯನ್ನು ಪಡೆದಂತ ಖ್ಯಾತ ಹಿನ್ನೆಲೆ ಗಾಯಕರು ಡಾ. ಎಸ್ .ಪಿ .ಬಿ. ಇವರು ತಮಿಳು .ಹಿಂದಿ .ತೆಲುಗು ಕನ್ನಡ ಹೀಗೆ ಹಲುವ ಭಾಷೆಗಳ ಚಲನಚಿತ್ರಗಳಲ್ಲಿ ಧ್ವನಿಗೆ ತಕ್ಕಹಾಗೆ ಹಾಡನ್ನು ಹಾಡಿದವರು .ಇವರು ಸುಮಾರು 45000 ಸಾವಿರ ಹಾಡುಗಳನ್ನು ಹಾಡಿ ದಾಖಲೆಯನ್ನು ನಿರ್ಮಾಣ ಮಾಡಿದ್ದಾರೆ .ಹಿನ್ನೆಲೆ ಗಾಯಕರಾಗಿ .ನಿರ್ದೇಶಕರಾಗಿ. ನಿರ್ಮಾಪಕರಾಗಿ. ಸಂಗೀತ ಕಾರ್ಯಕ್ರಮಗಳ ನಿರೂಪಕರಾಗಿ. ನಟರಾಗಿ ಸುಮಾರು 6 ರಾಷ್ಟ್ರ ಪ್ರಶಸ್ತಿ ಸುಮಾರು 25 ತೆಲುಗು ಭಾಷೆಯ ಪ್ರಶಸ್ತಿ ಹೀಗೆ ಹಲವಾರು ಪ್ರಶಸ್ತಿಯನ್ನು ಪಡೆದಂತ. ಮಹಾನ್ ಹಿನ್ನೆಲೆ ಗಾಯಕ ಡಾ.ಎಸ್ .ಪಿ .ಬಿ .ಕನ್ನಡದಲ್ಲಿ ಎದೆ ತುಂಬಿ ಹಾಡುಗಳು ಎಂಬ ಕಾರ್ಯಕ್ರಮವನ್ನು ಪ್ರಾರಂಭ ಮಾಡಿ ಹಲವಾರು ಕಲಾವಿದರನ್ನು ಗುರುತಿಸಿ ಅವರಿಗೆ ಪ್ರೋತ್ಸಾಹಿಡಿದಂತ ಮಹಾನ್ ವ್ಯಕ್ತಿ ಇಂ.ಥ ಖ್ಯಾತ ಹಿನ್ನೆಲೆ ಗಾಯಕನ ಗುರುತಿಸುವ ನಿಟ್ಟನಲ್ಲಿ ಮೋಹನ್ ಮೆಲೋಡಿಸ್ ಕೊರೋಕೆ ಸ್ಟುಡಿಯೋ ಮತ್ತು ಅವರ ಸಂಗೀತ ಬಳಗದವರು ಈ ಸರ್ಕಾರಿ ನೌಕರರ ಸಂಘದ ಭವನದಲ್ಲಿ ಹುಟ್ಟುಹಬ್ಬವನ್ನ ಆಚರಣೆ ಮಾಡುತ್ತಿರುವುದು.

ಪ್ರಮುಖ ರಾದ ಮೋಹನ್ .ವೃತ್ತಿಯಲ್ಲಿ ವಕಿಲರಾಗಿದ್ದರು ಪ್ರಗತಿಯಲ್ಲಿ ಯಲ್ಲಿ ಸಂಗೀತವನ್ನು ಮೈಗೂಡಿಸಿಕೊಂಡಿದ್ದಾರೆ .ಒಬ್ಬ ಮಹಾನ್ ಹಿನ್ನೆಲೆ ಗಾಯಕ ಹುಟ್ಟುಹಬ್ಬ ಒಬ್ಬ ಸಂಗೀತಗಾರನಾಗಿ ಬಗ್ಗೆ ಕರೋಕೆ ಸ್ಟುಡಿಯೋ ಎಲ್ಲಾ ಸಂಗೀತ ಬಳಕೆಗೆ ಅಭಿನಂದನೆಗಳು ಎಂದು ದಿನಾಂಕ ಜೂನ್ 4 .2026 ರಂದು ರಾಯಚೂರು ನಗರದ ಸರ್ಕಾರಿ ನೌಕರ ಸಂಘದ ದಲ್ಲಿ ನಡೆದ ಡಾಕ್ಟರ್ ಎಸ್ ಬಿ ಬಾಲಸುಬ್ರಮಣ್ಯಂ ರವರ ಹುಟ್ಟು ಹಬ್ಬದ ಅಂಗವಾಗಿ ಪಾಲ್ಗೊಂಡು ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ನಂತರ ಪುಷ್ಪಗಳನ್ನ ಹಾಕಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ ದಂಡಪ್ಪ ಬಿರಾದಾರ್. ಮಾತನಾಡಿದರು ನಂತರ ವಕೀಲರಾದ ಮತ್ತು ಹಾಡುಗಾರರಾದ ರೆಡ್ಡತಿಮ್ಮಯ್ಯ ಅವರುಮಾತನಾಡುತ್ತಾ .ರಾಯಚೂರಿಗೆ ಇವರು ಬಂದಿದ್ದರು .ಇವರನ್ನು ನಾನು ಮುಖಾಮುಖಿಯಾಗಿ ಮಾತನಾಡಿಸಿದ್ದೇನೆ .ಇಂಥವರು ನಮ್ಮ ರಾಯಚೂರಿಗೆ ಬಂದು ನಮ್ಮಂತ ಕಲಾಭಿಮಾನಿಗಳನ್ನು ಗುರುತಿಸೀ.ಆತ್ಮೀಯವಾಗಿ ಮಾತನಾಡಿದ್ದಾರೆ ಎಂದು ಹೇಳಿದರು .ಈ ಸಂದರ್ಭದಲ್ಲಿ ಮೋಹನ್ ವಕೀಲರು ಪ್ರಾಸ್ತಾವಿಕವಾಗಿ ಮಾತನಾಡಿದರು ವೇದಿಕೆಯಲ್ಲಿ ಎಂ ಎಸ್ ಪಾಟೀಲ್ ವಕೀಲರು ರೆಡ್ಡಿ ತಿಮ್ಮಯ್ಯ ಚಂದ್ರಶೇಖರ್ ರೆಡ್ಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.ನಂತರ ಶ್ರೀ ಮೋಹನ್ .ರಾಜೇಶ್ವರಿ ಕಾಡ್ಲೂರ ಅಂಬಾಭವಾನಿ, ಪಲ್ಲವಿ .ಲಕ್ಷ್ಮಿ ರೆಡ್ಡಿ. ಸುರೇಶ್ .ತಿಪ್ಪಣ್ಣ .ಶ್ರೀಶೈಲ. ಮಾನ್ಸೂರ್ ಡಾ. ಅವ್ಜದ್ ಸೇರಿದಂತೆ ಹಲವಾರು ರಾಯಚೂರಿನ ಗಾಯಕರು ತಮ್ಮ ಸಿರಿಕಂಠದಿಂದ ಗೀತೆಗಳು ಹಾಡಿ ಪ್ರೇಕ್ಷಕರನ್ನು ಸಂತೋಷಗೊಳಿಸಿದರು ಕಾರ್ಯಕ್ರಮದ ಕೊನೆಯಲ್ಲಿ ಶ್ರೀನಿವಾಸ್ ಕೆಟಿ ನಿರೂಪಿಸಿದರು ತಿಪ್ಪಣ್ಣನವರು ವಂದಿಸಿದರು.

ಮೊದಲನೇ ಪುಟದಿಂದ

### ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ವಿಶ್ವ ಪರಿಸರ ದಿನಾಚರಣೆ

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ನ್ಯಾ. ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ.

ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮುಂದಿನ ಪೀಳಿಗೆಗೆ ಒಳ್ಳೆಯ ಬದುಕು ನೀಡುವ ನಿಟ್ಟಿನಲ್ಲಿ ಉತ್ತಮ ಪರಿಸರವನ್ನು ನೀಡುವ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಗಿಡಗಳನ್ನು ನೆಟ್ಟಾಕ್ಷಣ ನಮ್ಮ ಜವಾಬ್ದಾರಿ ಮುಗಿಯುವುದಿಲ್ಲ. ಅದನ್ನು ಒಂದು ಹಂತದವರೆಗೆ ಅವುಗಳ ಪೋಷಣೆ ಮಾಡಿ ಜನ, ಜಾನುವಾರುಗಳಿಗೆ ಬಲಿಯಾಗದಂತೆ ಕಾಪಾಡ ಬೇಕಿದೆ ಎಂದರು.

ಪ್ರಕೃತಿಯಿಂದ ಪ್ರೇರಿತವಾಗಿದೆ. ಹವಾಮಾನಕ್ಕಾಗಿ. ನಮ್ಮ ಭವಿಷ್ಯಕ್ಕಾಗಿ ಎಂಬುದು 2026ರ ವಿಶ್ವ ಪರಿಸರ ದಿನದ ಅಧಿಕೃತ ಘೋಷವಾಕ್ಯ ಆಗಿದ್ದು, ಕಲ್ಯಾಣ ಕರ್ನಾಟಕದ ಭಾಗದಲ್ಲಿ ಪರಿಸರ ಪ್ರಮಾಣ ಕಡಿಮೆ ಇದೆ. ಮಳೆಗಾಲದಲ್ಲಿ ಸಸಿಗಳನ್ನು ನೆಟ್ಟರೆ ಮುಂದಿನ ದಿನಗಳಲ್ಲಿ ವಾತಾವರಣದಲ್ಲಿ ಬದಲಾವಣೆಗೆ ಸಹಕಾರಿಯಾಗುತ್ತದೆ ಎಂದರು.

ಈ ವೇಳೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಮಾತನಾಡಿ, ರಾಯಚೂರಿನಲ್ಲಿ ವರ್ಷದಿಂದ ವರ್ಷಕ್ಕೆ ತಾಪಮಾನವು ಹೆಚ್ಚಳವಾಗುತ್ತಿದ್ದು, ಅದನ್ನು ನಿಯಂತ್ರಣ ಮಾಡಲು ಗಿಡಮರಗಳಿಂದ ಸಾಧ್ಯ. ರಾಜ್ಯ ಕಾನೂನು ಪ್ರಾಧಿಕಾರದ ಆದೇಶದಂತೆ 5 ಕೋಟಿ ಸಸಿಗಳನ್ನು ಹಾಕಲಾಗುತ್ತದೆ. 2 ಕೋಟಿ ಸಸಿಗಳು ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶದಲ್ಲಿ ಹಾಗೂ 3 ಕೋಟಿ ಸಸಿಗಳನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹಾಕಲಾಗುತ್ತದೆ. ಶಾಲಾ ಹಾಗೂ ಕಾಲೇಜು ಸೇರಿದಂತೆ ಸ್ಥಳವಕಾಶ ಇರುವ ಕಡೆಗಳಲ್ಲಿ ಸಸಿಗಳನ್ನು ಹಾಕಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ರಾಯಚೂರಿನ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ ಬಾಬು, ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಕಾಂತ್.ಎಸ್.ವಿ., ಸಿ.ಜೆ.ಎಂ. ನ್ಯಾಯಾಲಯದ ಪ್ರಧಾನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಬಿ.ಟಿ.ಅನ್ನಪೂರ್ಣೇಶ್ವರಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 1ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಶಂಕರಪ್ಪ ಮಾಲಶೆಟ್ಟಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 2ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಸಾಗರ್ ಗುರುಗೌಡ ಪಾಟೀಲ್, ಜೆ.ಎಂ.ಎಫ್.ಸಿ. 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಚನ್ನಬಸಪ್ಪ ಆರ್. ಕೂಡಿ, ವಲಯ ಅರಣ್ಯ ಅಧಿಕಾರಿ ರಾಜೇಶ ನಾಯಕ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಇದ್ದರು.

# ಜಮೀರ್ ಅಹಮ್ಮದ್ ಗೆ ಸಚಿವ ಸ್ಥಾನಕ್ಕೆ ಮುಸ್ಲಿಂ ಸಮುದಾಯದ ಆಗ್ರಹ




**ಬಳ್ಳಾರಿ, ಜೂ.5:** ಇಲ್ಲಿನ ಕೌಲ್ ಬಜಾರ್ ನ ಮಸೀದಿ ಆವರಣದಲ್ಲಿ ಮುಸ್ಲಿಂ ಸಮುದಾಯದ ಜನತೆ ಜಮೀರ್ ಅಹಮ್ಮದ್ ಅವರಿಗೆ ಸಚಿವ ಸ್ಥಾನ ನೀಡದ್ದನ್ನು ಖಂಡಿಸಿ. ಸಚಿವ ಸಂಪುಟ ವಿಸ್ತರಣೆಯಲ್ಲಿ ಜಮೀರ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿದರು.

ಇಂದು ಶುಕ್ರವಾರದ ಪ್ರಾರ್ಥನೆ ಬಳಿಕ ಪಾಲಿಕೆ ಸದಸ್ಯ ಆಸಿಫ್ ಅವರ ನೇತೃತ್ವದಲ್ಲಿ ದಿವಾನಿಮಸ್ತಾನ್ ದರ್ಗಾ ಆವರಣದಲ್ಲಿ ಧರ್ಮದ ಗುರುಗಳು, ಮುಖಂಡರು ಸೇರಿ ಜಮೀರ್ ಅಹಮ್ಮದ್ ಅವರು ಸಮುದಾಯದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ ಅಷ್ಟೇ ಅಲ್ಲದೆ ಕಾಂಗ್ರೆಸ್ ಪಕ್ಷದ ಬೆಳವಣಿಗೆಗೂ ದುಡಿದಿದ್ದಾರೆ. ಯಾರೋ ಉದ್ದೇಶ ಪೂರ್ವಕವಾಗಿ ದಾವಣಗೆರೆ ಚುನಾವಣೆಯ ವಿಷಯದಲ್ಲಿ ಎಐ ಆಡಿಯೋ ಬಿಡುಗಡೆ ಮಾಡಿ ಪಕ್ಷಕ್ಕೆ ಧಕ್ಕೆ ತರುವಂತೆ ಮಾಡಿದೆ.

ಇದೆಲ್ಲಾ ಉದ್ದೇಶ ಪೂರ್ವಕವಾಗಿ ಆಗಿದೆ. ಇದನ್ನು ಪರಿಗಣಿಸದೆ ಕಾಂಗ್ರೆಸ್ ಪಕ್ಷದ ಹೈಕಮಾಂಡ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಜಮೀರ್ ಅಹಮ್ಮದ್ ಅವರಿಗೆ ಸಚಿವ ಸ್ಥಾನನೀಡಬೇಕು ಎಂದು ಆಗ್ರಹಿಸಲಾಯ್ತು.

# ಅರ್ಥಪೂರ್ಣವಾಗಿ ವಿಶ್ವಪರಿಸರ ದಿನಾಚರಣೆ



ಧೈರ್ಯದ ದಾರಿ

**ಗಿಲ್ಲೇಸೂಗೂರು.ಜೂ. 05:** ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಬೆಂಗಳೂರು ಪಬ್ಲಿಕ್ ಸ್ಕೂಲ್‌ನಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ರ್‍ಯಾಲಿಯಲ್ಲಿ ಭಾಗವಹಿಸಿದರು. ರ್‍ಯಾಲಿಯ ವೇಳೆ ಪರಿಸರ ರಕ್ಷಣೆ ಕುರಿತ ಘೋಷಣೆಗಳನ್ನು ಕೂಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ರ್‍ಯಾಲಿಯ ನಂತರ ಶಿಬಿರದ ಕೇಂದ್ರದಲ್ಲಿ ಪರಿಸರ ಸಂರಕ್ಷಣೆ, ರಸ್ತೆ ಸುರಕ್ಷತೆ, ಹೆಲ್ಮೆಟ್ ಧರಿಸುವ ಮಹತ್ವ ಹಾಗೂ ಸಂಚಾರ ನಿಯಮಗಳ ಪಾಲನೆ ಕುರಿತು ಜಾಗೃತಿ ಮೂಡಿಸುವ ನೃತ್ಯ ಕಾರ್ಯಕ್ರಮಗಳನ್ನು ವಿದ್ಯಾರ್ಥಿಗಳು ಪ್ರದರ್ಶಿಸಿದರು. ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಇದೇ ಸಂದರ್ಭದಲ್ಲಿ ಸಸಿ ನೆಡುವ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಕಾರ್ಯಕ್ರಮವೂ ನಡೆಯಿತು. ಬಳಿಕ ಅಳವಡಿಸಿಕೊಳ್ಳುವುದು ಪ್ರತಿಯೊಬ್ಬರ ಶಾಲೆಗೆ ಮರಳಿ ವಿದ್ಯಾರ್ಥಿಗಳು "ತ್ಯಾಜ್ಯದಿಂದ ಉಪಯುಕ್ತ ವಸ್ತುಗಳ ತಯಾರಿ", ಚಿತ್ರಕಲಾ ಸ್ಪರ್ಧೆ ಹಾಗೂ ವಿವಿಧ ಆಟಗಳಲ್ಲಿ ಉತ್ಸಾಹದಿಂದ ಭಾಗವಹಿಸಿದರು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಡಾ. ಮಹದೇವ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಪರಿಸರ ಜಾಗೃತಿ, ಪರಿಸರ ಸಂರಕ್ಷಣೆಯ ಅಗತ್ಯತೆ ಹಾಗೂ ವೈಯಕ್ತಿಕ ಸ್ವಚ್ಛತೆಯ ಮಹತ್ವದ ಕುರಿತು ಮಾಹಿತಿ ನೀಡಿದರು.

ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಈ ಎಲ್ಲಾ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲಾಯಿತು. ಭವಿಷ್ಯದ ಪೀಳಿಗೆಗಾಗಿ ಕಾಪಾಡುವ ಪರಿಸರವನ್ನು ಸಂಕಲ್ಪವನ್ನು ಎಲ್ಲರೂ ಕೈಗೊಳ್ಳಬೇಕೆಂಬ ಸಂದೇಶವನ್ನು ಸಾರಲಾಯಿತು. ಇಂದು ಒಂದು ಸಸಿ ನೆಡಿ, ನಾಳೆ ಒಂದು ಸುಂದರ ಭವಿಷ್ಯವನ್ನು ಬೆಳೆಸಿ ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು. ಈ ಸಂದರ್ಭದಲ್ಲಿ ಶಾಲೆಯ ಸಂಸ್ಥೆಯ ಅಧ್ಯಕ್ಷರಾದ ವಿ. ವೆಂಕಟೇಶ್ವರ, ಇಂದ್ರ ವೆಂಕಟೇಶ್ವರ, ಸಿ. ಎಸ್. ಸೇದು ಲಕ್ಷ್ಮಿ ಶಾಲೆಯ ಶಿಕ್ಷಕ-ಶಿಕ್ಷಕಿಯರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಚಿಟ್ಟಾ ವಾಡಿ-ಚಿಟ್ಟಾ ಗ್ರಾಮದಲ್ಲಿ 3 ಕೋಟಿ ವೆಚ್ಚದ ಸೇತುವೆ ಕಾಮಗಾರಿಗೆ ಗುದ್ದಲಿ ಪೂಜೆ



**ಬೀದರ್: ಜೂ.5:** ಬೀದರ್ ದಕ್ಷಿಣ ಕ್ಷೇತ್ರದ ಚಿಟ್ಟಾ ವಾಡಿ-ಚಿಟ್ಟಾ ಗ್ರಾಮದ ಮುಖ್ಯ ರಸ್ತೆಯಲ್ಲಿ ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ಸೇತುವೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು. ಈ ಸೇತುವೆ ನಿರ್ಮಾಣವು ಗ್ರಾಮೀಣ ಭಾಗದ ಅಭಿವೃದ್ಧಿಗೆ ಹೊಸ ಮೈಲಿಗಲ್ಲಾಗಲಿದ್ದು, ಸ್ಥಳೀಯ ಜನರ ಬಹುದಿನಗಳ ಕನಸನ್ನು ನನಸಾಗಿಸುವ ಮಹತ್ವದ ಯೋಜನೆಯಾಗಿದೆ.

ವರ್ಷಗಳಿಂದ ಮಳೆಗಾಲದಲ್ಲಿ ಈ ಭಾಗದ ಜನರು ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದರು. ರಸ್ತೆ ಸಂಪರ್ಕ ಕಡಿತಗೊಂಡು ರೈತರು ತಮ್ಮ ಕೃಷಿ ಚಟುವಟಿಕೆಗಳಿಗೆ, ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ಹಾಗೂ ಸಾರ್ವಜನಿಕರು ತಮ್ಮ ದೈನಂದಿನ ಕೆಲಸಗಳಿಗೆ ತೆರಳಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಸೇತುವೆ ನಿರ್ಮಾಣಕ್ಕೆ ಬೇಡಿಕೆ ಸಲ್ಲಿಸಿದ್ದರು.

ಈಗ ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಸುಸಜ್ಜಿತ ಸೇತುವೆಯು ಚಿಟ್ಟಾ ವಾಡಿ, ಚಿಟ್ಟಾ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಉತ್ತಮ ಸಂಚಾರ ವ್ಯವಸ್ಥೆಯನ್ನು ಕಲ್ಪಿಸಲಿದೆ. ವಿಶೇಷವಾಗಿ ಮಳೆಗಾಲದಲ್ಲಿ ಉಂಟಾಗುತ್ತಿದ್ದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆಯಲಿದ್ದು, ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಸುಲಭವಾಗಿ ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗಲಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸುರಕ್ಷಿತವಾಗಿ ಸಂಚರಿಸಲು ಸಹ ನೆರವಾಗಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು, ಜನರ ಅಗತ್ಯತೆಗಳಿಗೆ ಸ್ಪಂದಿಸಿ ಕ್ಷೇತ್ರದ ಅಭಿವೃದ್ಧಿಗೆ ನಿರಂತರವಾಗಿ ಆದ್ಯತೆ ನೀಡಲಾಗುತ್ತಿದೆ. ರಸ್ತೆ, ಸೇತುವೆ, ಕುಡಿಯುವ ನೀರು, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಜನರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಚಿಟ್ಟಾ ವಾಡಿ-ಚಿಟ್ಟಾ ಸೇತುವೆ ನಿರ್ಮಾಣವು ಈ ಭಾಗದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ ಎಂದು ಹೇಳಿದರು.

ಗ್ರಾಮಸ್ಥರು ಕೂಡ ಸಂತಸ ವ್ಯಕ್ತಪಡಿಸಿ, ಹಲವಾರು ವರ್ಷಗಳಿಂದ ಈ ಸೇತುವೆ ನಿರ್ಮಾಣಕ್ಕಾಗಿ ನಾವು ಕಾಯುತ್ತಿದ್ದೆವು. ಮಳೆಗಾಲದಲ್ಲಿ ಸಂಚಾರ ತುಂಬಾ ಕಷ್ಟಕರವಾಗುತ್ತಿತ್ತು. ಈಗ ಕಾಮಗಾರಿಗೆ ಚಾಲನೆ ದೊರೆತಿರುವುದು ಸಂತಸದ ಸಂಗತಿಯಾಗಿದೆ. ಜನರ ಸಮಸ್ಯೆಯನ್ನು ಅರಿತು ಅಭಿವೃದ್ಧಿ ಕಾರ್ಯ ಕೈಗೊಂಡಿರುವ ಶಾಸಕರಿಗೆ ನಾವು ಕೃತಜ್ಞರಾಗಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಉದಯಕುಮಾರ ತೋರಣ, ಶಿವಕುಮಾರ ಸ್ವಾಮಿ, ಸಂಜುಕುಮಾರ ಮಾಶೆಟ್ಟಿ, ವೆಂಕಟರೆಡ್ಡಿ, ಅರುಣಕುಮಾರ, ಅನೀಲ ಗುನ್ನಳ್ಳಿ, ಜೋಸೆಫ್ ಕೊಡ್ಡೆಕರ್, ವಿಧ್ಯಾಸಾಗರ ಸ್ವಾಮಿ, ಪ್ರತಿಮಾ ಸ್ವಾಮಿ, ಆನಂದ ಪಾಟೀಲ, ಅನೀಲ ಚಿಟ್ಟಾ, ಶಿವಕುಮಾರ ಪಾಟೀಲ, ರಾಜಶೇಖರ ನೌಬಾದೆ, ರಾಮು ಅಮಲಾಪುರ, ಮಲ್ಲಿಕಾರ್ಜುನ ವಾಡಿ, ಮಹೇಶ ತೋರಣ, ಮಹೇಶ ದೊಡ್ಡಿ, ಜನಾರ್ದನ ರೆಡ್ಡಿ, ಶಿವಕುಮಾರ, ಶ್ರೀಕಾಂತ, ಸುಂದರ ವಕೀಲ್, ಈರಯ್ಯಾ ಸ್ವಾಮಿ, ಮಹೇಶ್ ವಾಡಿ, ಬಸು ಹೇಡೆ, ಅರುಣ ಚಿಟ್ಟಾ, ಶಿವರಾಜ ಚಿಟ್ಟಾ,ನರಸಪ್ಪ ಚಿಟ್ಟಾ, ಧನರಾಜ ಮತ್ತು ಅನೇಕರಿದ್ದರು.

# ಪ್ಯಾಕೇಜಿಂಗ್ ಘಟಕಗಳ ಸ್ಥಾಪಿಸಲು ಅರ್ಜಿ ಆಹ್ವಾನ

**ರಾಯಚೂರು ಜೂನ್ 05:** ರಾಯಚೂರಿನ ಜಂಟಿ ಕೃಷಿ ನಿರ್ದೇಶಕರ ಕಚೇರಿಯಿಂದ 2026-27ನೇ ಸಾಲಿನ ದ್ವಿ-ದಳ ಧಾನ್ಯಗಳಲ್ಲಿ ಆತ್ಮ ನಿರ್ಭರತೆ ಅಭಿಯಾನದಡಿ ದ್ವಿದಳ ಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸಲು ಹಾಗೂ ರೈತರ ಆದಾಯ ಹೆಚ್ಚಿಸಲು ಕೊಯ್ಲೋತ್ತರ ಮೂಲಭೂತ ಸೌಕರ್ಯಾಭಿವೃದ್ಧಿಗಾಗಿ ಸಂಸ್ಕರಣೆ ಹಾಗೂ ಪ್ಯಾಕೇಜಿಂಗ್ ಘಟಕಗಳನ್ನು ಸ್ಥಾಪಿಸಲು ಅರ್ಹ ರೈತರು, ವೈಯಕ್ತಿಕ ಫಲಾನುಭವಿಗಳು, ರೈತ ಉತ್ಪಾದಕ ಸಂಸ್ಥೆಗಳು, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು ಹಾಗೂ ನೋಂದಾಯಿತ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆಯ ಮಾನದಂಡಗಳು: ವೈಯಕ್ತಿಕ ಫಲಾನುಭವಿ ಕನಿಷ್ಠ 21 ವರ್ಷ ವಯೋಮಿತಿ ಹೊಂದಿರಬೇಕು.

ಪ್ರತಿ ಕುಟುಂಬದಿಂದ (ಪತಿ/ಪತ್ನಿ ಹಾಗೂ ಅವಿವಾಹಿತ ಮಕ್ಕಳು) ಒಂದು ಅರ್ಹ ಫಲಾನುಭವಿಗೆ ಮಾತ್ರ ಸಹಾಯಧನ ಪಡೆಯಲು ಅವಕಾಶವಿರುತ್ತದೆ. ಯೋಜನಾ ವೆಚ್ಚದ ಶೇ. 15% ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರುವುದು.

ಗುಂಪು: ಅರ್ಹ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿಯಾಗಿರುವುದು ಹಾಗೂ ಕನಿಷ್ಠ 2ವರ್ಷ ಕಾರ್ಯನಿರ್ಹಿಸಬೇಕು. ಯೋಜನಾ ವೆಚ್ಚದ ಶೇ.15 ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರುವುದು.

ಆರ್ಥಿಕ ನೆರವು ಈ ಯೋಜನೆಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಶೇ.60:40 ಅನುಪಾತದ ಸಹಾಯಧನದಡಿ, ಯೋಜನಾ ವೆಚ್ಚದ ಶೇ.33 ರಷ್ಟು ಸಹಾಯಧನವನ್ನು (ರೂ.25.00 ಲಕ್ಷಗಳ ಗರಿಷ್ಠ ಮಿತಿಯೊಂದಿಗೆ) ನೀಡಲಾಗುವುದು.

ಆಸಕ್ತರು ಅರ್ಜಿಯನ್ನು ಸಂಬಂಧಿಸಿದ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಜೂನ್ 30ರೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಹಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಅಥವಾ ಜಂಟಿ ಕೃಷಿ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಣ್ಣಮ್ಮ ದೇವಿಗೆ ಡಿಕೆಶಿ ವಿಶೇಷ ಪೂಜೆ



**ಬೆಂಗಳೂರು, ಜೂ. 5-** ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಡಿ.ಕೆ. ಶಿವಕುಮಾರ್ ರವರು ಇಂದು ಬೆಂಗಳೂರಿನ ನಗರ ದೇವತೆ ಅಣ್ಣಮ್ಮ ದೇವಿಯ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ನೆರವೇರಿಸಿದರು.

ಇಂದು ಬೆಳಿಗ್ಗೆ ಅಣ್ಣಮ್ಮ ದೇವಿಯ ದೇವಸ್ಥಾನಕ್ಕೆ ತೆರಳಿದ ಡಿ.ಕೆ. ಶಿವಕುಮಾರ್ ರವರು ದೇವಸ್ಥಾನದ ಆವರಣದಲ್ಲಿರುವ ಬಿಸಲ್ ಮಾರಮ್ಮ ದೇವಸ್ಥಾನಕ್ಕೆ ಮೊಸರು ಅಭಿಷೇಕ ಮಾಡಿದರು.

ನಂತರ ಅಣ್ಣಮ್ಮ ದೇವಿಗೆ ಮಂಗಳಾರತಿ ಬೆಳಗಿ ವಿಶೇಷ ಪೂಜೆ ಸಲ್ಲಿಸಿದರು.ಅಣ್ಣಮ್ಮ ದೇವಿಯ ದರ್ಶನದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಣ್ಣಮ್ಮ ದೇವಿ ನಮ್ಮ ನಾಡಿನ ನಗರದ ಗ್ರಾಮ ದೇವತೆ. ತಾಯಿ ಕೃಪೆಯಿಂದ ರಾಜ್ಯದಲ್ಲಿ ಉತ್ತಮ ಮಳೆ, ಬೆಳೆಯಾಗಲಿ ಎಂದು ಬೇಡಿಕೊಂಡಿದ್ದೇನೆ ಎಂದರು.ರಾಜ್ಯದ ಅಭಿವೃದ್ಧಿಗೆ ತಾಯಿ ಅಣ್ಣಮ್ಮ ಆಶೀರ್ವಾದ ಸಿಗಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ದಿನೇಶ್ ಗುಂಡೂರಾವ್ ಉಪಸ್ಥಿತರಿದ್ದರು. ಪೂರ್ಣಕುಂಭ ಸ್ವಾಗತನಗರ ದೇವತೆ ಅಣ್ಣಮ್ಮನ ಗುಡಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಅಣ್ಣಮ್ಮ ದೇವಸ್ಥಾನದ ಆಡಳಿತ ಮಂಡಳಿ ಪೂರ್ಣಕುಂಭ, ಮಂಗಳವಾದ್ಯಗಳ ಮೂಲಕ ಸ್ವಾಗತ ನೀಡಿತು.

# ಒತ್ತಡವನ್ನು ಯಶಸ್ಸಿನ ಮೆಟ್ಟಿಲಾಗಿಸಿಕೊಳ್ಳಿ: ಡಾ. ವಿಜಯಲಕ್ಷ್ಮೀ ಬಾಳೆಕುಂದ್ರಿ

**ಕಲಬುರಗಿ:ಜೂ.5:**ಶರಣಬಸವೇಶ್ವರ ವಸತಿ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಗಾಗಿ “"ಒತ್ತಡದಿಂದ ಯಶಸ್ಸಿನತ್ತ”ಎಂಬ ವಿಶೇಷ ಪ್ರೇರಣಾತ್ಮಕ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಖ್ಯಾತ ಮಕ್ಕಳ ಹೃದ್ರೋಗ ತಜ್ಞೆ ಹಾಗೂ ಜನಪ್ರಿಯ ಸಾಹಿತಿಯಾಗಿ ಅಪಾರ ಜನಪ್ರಿಯತೆ ಗಳಿಸಿದ ಡಾ. ವಿಜಯಲಕ್ಷ್ಮಿ ಬಾಳೇಕುಂದ್ರಿ ಅವರು ವಿದ್ಯಾರ್ಥಿಗಳಿಗೆ ಯಶಸ್ವಿ ಜೀವನದ ಮೌಲ್ಯಗಳು, ಆರೋಗ್ಯಕರ ಅಭ್ಯಾಸಗಳು ಹಾಗೂ ಸಕಾರಾತ್ಮಕ ಮನೋಭಾವದ ಕುರಿತು ಮಹತ್ವದ ಸಂದೇಶಗಳನ್ನು ನೀಡಿದರು. ಭಾಷಣದ ವೇಳೆ ಅವರು, ಯಶಸ್ಸಿನ ಮೂಲಾಧಾರವು ವ್ಯಕ್ತಿಯ ಮನಸ್ಥಿತಿ (ಮೈಂಡ್ಸೆಟ್) ಯಲ್ಲಿದೆ. ಪ್ರತಿಭೆಗಿಂತಲೂ ಕಲಿಯುವ ಮನೋಭಾವ, ನಿರಂತರ ಪ್ರಯತ್ನ ಮತ್ತು ಆತ್ಮವಿಶ್ವಾಸವೇ ವ್ಯಕ್ತಿಯನ್ನು ಉನ್ನತ ಸಾಧನೆಯತ್ತ ಕೊಂಡೊಯ್ಯುತ್ತವೆ. ಸ್ಥಿರ ಮನೋಭಾವ (ಫಿಕ್ಸಡ್ ಮೈಂಡ್ಸೆಟ್) ಹೊಂದಿರುವವರು ತಮ್ಮ ಸಾಮರ್ಥ್ಯವನ್ನು ಸೀಮಿತಗೊಳಿಸಿಕೊಳ್ಳುತ್ತಾರೆ. ಆದರೆ ಬೆಳವಣಿಗೆಯ ಮನೋಭಾವ (ಉಡಿಂತಿಣು ಒುಟಿಥಜಣ) ಹೊಂದಿದವರು ಪ್ರತಿಯೊಂದು ಸವಾಲನ್ನೂ ಅವಕಾಶವಾಗಿ ಪರಿವರ್ತಿಸಿಕೊಳ್ಳುತ್ತಾರೆ ಎಂದು ವಿವರಿಸಿದರು. ವಿದ್ಯಾರ್ಥಿಗಳು ಜೀವನದಲ್ಲಿ ಶ್ರೇಯಸ್ಸಿನ ಮಾರ್ಗವನ್ನು ಆಯ್ಕೆ ಮಾಡಿಕೊಳ್ಳಬೇಕು. ಉತ್ತಮ ಚಿಂತನೆ, ಉತ್ತಮ ಅಭ್ಯಾಸಗಳು ಹಾಗೂ ಸತತ ಅಧ್ಯಯನವು ವ್ಯಕ್ತಿತ್ವ ವಿಕಸನಕ್ಕೆ ಅಗತ್ಯವೆಂದು ಅವರು ಹೇಳಿದರು. ಜಗತ್ತಿನ ಶ್ರೇಷ್ಠ ಸಾಧಕರ ಯಶಸ್ಸಿನ ಹಿಂದೆ ಉತ್ತಮ ಮನೋಭಾವ ಮತ್ತು ನಿರಂತರ ಪರಿಶ್ರಮವೇ ಕಾರಣ ಎಂದು ಉದಾಹರಣೆಗಳೊಂದಿಗೆ ವಿವರಿಸಿದರು. ಶಿಕ್ಷಕ ವೃತ್ತಿಯ ಮಹತ್ವವನ್ನು ಉಲ್ಲೇಖಿಸಿದ ಅವರು, ಸಮಾಜದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದಲ್ಲಿ ಶಿಕ್ಷಕರು ಹಾಗೂ ಪೋಷಕರ ಕೊಡುಗೆ ಅನನ್ಯವಾಗಿದ್ದು, ಅವರ ಮಾರ್ಗದರ್ಶನವನ್ನು ಗೌರವಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯ ಎಂದು ಹೇಳಿದರು. ಆರೋಗ್ಯಕರ ಜೀವನಶೈಲಿಯ ಕುರಿತು ಮಾತನಾಡಿದ ಅವರು, ಉತ್ತಮ ಆರೋಗ್ಯಕ್ಕಾಗಿ ಶುದ್ಧ ಗಾಳಿ, ಶುದ್ಧ ನೀರು, ಸಮತೋಲನ ಆಹಾರ, ನಿಯಮಿತ ವ್ಯಾಯಾಮ ಹಾಗೂ ದುಷ್ಟ ಚಟಗಳಿಂದ ದೂರವಿರುವುದು ಅಗತ್ಯವೆಂದು ತಿಳಿಸಿದರು. ಬಾಲ್ಯದಲ್ಲಿಯೇ ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದರಿಂದ ಆರೋಗ್ಯಕರ ಹಾಗೂ ಯಶಸ್ವಿ ಜೀವನವನ್ನು ರೂಪಿಸಿಕೊಳ್ಳಬಹುದು. ಇತ್ತೀಚಿನ ದಿನಗಳಲ್ಲಿ ಮಕ್ಕಳಲ್ಲಿ ಹೆಚ್ಚುತ್ತಿರುವ ಸೋಂಕು ರೋಗಗಳು, ಸ್ಥೂಲಕಾಯ (ಔಭಜಿಣಥಿ), ಅಪೌಷ್ಟಿಕತೆ ಹಾಗೂ ಜೀವನಶೈಲಿ ಸಂಬಂಧಿತ ಸಮಸ್ಯೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಸ್ವಚ್ಛತೆ, ಸುರಕ್ಷಿತ ಕುಡಿಯುವ ನೀರು ಮತ್ತು ಪೌಷ್ಟಿಕ ಆಹಾರದ ಮಹತ್ವವನ್ನು ವಿವರಿಸಿದರು. ನೀರು ಜೀವದ ಮೂಲವಾಗಿದ್ದು, ಆರೋಗ್ಯ ರಕ್ಷಣೆಯಲ್ಲಿ ಅದರ ಪಾತ್ರ ಅಪಾರವಾಗಿದೆ




ಎಂದು ತಿಳಿಸಿದರು. ತಂಬಾಕು, ಧೂಮಪಾನ ಹಾಗೂ ಮದ್ಯಪಾನದಂತಹ ದುಶ್ಚಟಗಳು ವ್ಯಕ್ತಿಯ ಆರೋಗ್ಯ ಮಾತ್ರವಲ್ಲದೆ ಕುಟುಂಬ ಮತ್ತು ಸಮಾಜದ ಮೇಲೆಯೂ ದುಷ್ಪರಿಣಾಮ ಬೀರುತ್ತವೆ ಎಂದು ಎಚ್ಚರಿಸಿದರು. ಯುವಜನತೆ ಇಂತಹ ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನವನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಇಂದಿನ ಯುವಜನತೆ ಮೊಬೈಲ್ ಫೋ?ನ್, ಸಾಮಾಜಿಕ ಜಾಲತಾಣಗಳು ಹಾಗೂ ಅನಗತ್ಯ ಒತ್ತಡಗಳಿಗೆ ಹೆಚ್ಚು ಸಮಯ ಮೀಸಲಿಡುತ್ತಿರುವುದು ವಿಷಾದನೀಯ. ವಿದ್ಯಾರ್ಥಿಗಳು ತಮ್ಮ ಸಮಯವನ್ನು ಜ್ಞಾನಾರ್ಜನೆ, ಕೌಶಲ್ಯ ಅಭಿವೃದ್ಧಿ ಮತ್ತು ವ್ಯಕ್ತಿತ್ವ ವಿಕಸನಕ್ಕೆ ಬಳಸಬೇಕು ಎಂದು ಸಲಹೆ ನೀಡಿದರು. ಒತ್ತಡವನ್ನು ಶತ್ರುವಾಗಿ ಕಾಣದೆ ಅದನ್ನು ಸವಾಲಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಸ್ಪಷ್ಟ ಗುರಿ, ನಿಯಮಿತ ಅಭ್ಯಾಸ, ದೈಹಿಕ ಆರೋಗ್ಯದ ಕಡೆ ಗಮನ ಹಾಗೂ ಸಕಾರಾತ್ಮಕ ಚಿಂತನೆಗಳು ಯಶಸ್ಸಿನ ಪ್ರಮುಖ ಅಂಶಗಳಾಗಿವೆ ಎಂದು ತಿಳಿಸಿದರು. ವಿಫಲತೆಯನ್ನು ಭಯಪಡದೆ ಅದರಿಂದ ಪಾಠ ಕಲಿಯುವ ಮನೋಭಾವವೇ ಮಹತ್ತರ ಸಾಧನೆಗಳಿಗೆ ದಾರಿ ಮಾಡಿಕೊಡುತ್ತದೆ ಎಂದು ಅವರು ಹೇಳಿದರು. ಅಂತಿಮವಾಗಿ ವಿದ್ಯಾರ್ಥಿಗಳು ಆತ್ಮವಿಶ್ವಾಸ, ಶಿಸ್ತು, ನೈತಿಕ ಮೌಲ್ಯಗಳು ಹಾಗೂ ಸಕಾರಾತ್ಮಕ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಯಾವುದೇ ಒತ್ತಡವನ್ನು ಯಶಸ್ಸಿನ ಮೆಟ್ಟಿಲಾಗಿಸಿಕೊಳ್ಳಬಹುದು ಎಂದು ತಿಳಿಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಹಿಂದಿ ವಿಭಾಗದ ಮುಖ್ಯಸ್ಥರಾದ ಡಾ. ಚಂದ್ರಕಾಂತ ಪಾಟೀಲ ಅವರು, “ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಒತ್ತಡಕ್ಕೆ ಮಣಿಯದೆ ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು ನಿರಂತರ ಕಲಿಕೆಯ ಮನೋಭಾವ ಬೆಳೆಸಿಕೊಳ್ಳಬೇಕು

ವಿದ್ಯಾರ್ಥಿ ಜೀವನದಲ್ಲಿ ಪರೀಕ್ಷೆಗಳು, ಸ್ಪರ್ಧೆಗಳು, ಪೋ?ಷಕರ ನಿರೀಕ್ಷೆಗಳು ಹಾಗೂ ವೃತ್ತಿ ಆಯ್ಕೆಯಂತಹ ಅನೇಕ ಸವಾಲುಗಳು ಎದುರಾಗುತ್ತವೆ. ಇವುಗಳಿಂದ ಹೆದರದೆ, ಆತ್ಮವಿಶ್ವಾಸ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುನ್ನಡೆಯುವ ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಸಾಧಿಸುತ್ತಾರೆ ಎಂದು ತಿಳಿಸಿದರು. ಅವರು ಮುಂದುವರಿದು, “ಯಶಸ್ಸು ಎನ್ನುವುದು ಒಂದು ದಿನದಲ್ಲಿ ದೊರೆಯುವ ಫಲವಲ್ಲ. ಅದು ನಿರಂತರ ಪರಿಶ್ರಮ, ಶಿಸ್ತು, ಸಮಯದ ಸದ್ಬಳಕೆ ಮತ್ತು ಗುರಿಯ ಮೇಲಿನ ಅಚಲ ನಂಬಿಕೆಯಿಂದ ಲಭಿಸುವ ಸಾಧನೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನದೇ ಆದ ವಿಶೇಷ ಸಾಮರ್ಥ್ಯವನ್ನು ಹೊಂದಿದ್ದಾನೆ. ಇತರರೊಂದಿಗೆ ಹೋಲಿಕೆ ಮಾಡಿಕೊಳ್ಳುವ ಬದಲು ತನ್ನ ಸಾಮರ್ಥ್ಯವನ್ನು ಗುರುತಿಸಿ ಅದನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು” ಎಂದು ಹೇಳಿದರು.

# ಪರಿಸರದ ಬಗ್ಗೆ ಕಾಳಜಿ ಹಾಗೂ ಮಾಲಿನ್ಯದ ಬಗ್ಗೆ ಜಾಗೃತಿ ಅಗತ್ಯ: ಡಾ. ಜಗನ್ನಾಥ ಹೆಬ್ಬಾಳೆ

**ಬೀದರ, ಜೂ 5:** ಪರಿಸರವನ್ನು ಹಸಿರಾಗಿಸುವ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ ಮಾಲಿನ್ಯ ನಿಯಂತ್ರಣ ಕುರಿತು ಜನರಲ್ಲಿ ಜಾಗೃತಿ ಮೂಡಬೇಕು ಎಂದು ಕರ್ನಾಟಕ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ. ಜಗನ್ನಾಥ ಹೆಬ್ಬಾಳೆ ಹೇಳಿದರು.

ನಗರದ ಬರೀದ್ ಶಾಹಿ ಉದ್ಯಾನವನದಲ್ಲಿ ಹಿರಿಯ ಯೋಗ ಸಾಧಕರ ತಂಡದ ವತಿಯಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಮನೆ ಮತ್ತು ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸಮಾಜದಲ್ಲಿ ಸ್ವಚ್ಛತಾ ಸಂಸ್ಕೃತಿಯನ್ನು ಬೆಳೆಸಬಹುದಾಗಿದೆ ಎಂದರು. ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸ-ಕಡ್ಡಿ ಬಿಸಾಡದೆ, ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣ ಮಾಡಿದ ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ್, ಪರಿಸರ ಜಾಗೃತಿ ಮತ್ತು ಮಾಲಿನ್ಯ ನಿಯಂತ್ರಣದ ಕಾರ್ಯಗಳು ನಮ್ಮ ಮನೆಯಿಂದಲೇ ಆರಂಭವಾಗಬೇಕು ಎಂದು ಹೇಳಿದರು. ಸರ್ಕಾರದ ಹಸಿರೀಕರಣ ಮತ್ತು ಸ್ವಚ್ಛತಾ ಅಭಿಯಾನಗಳ ಮೂಲಕ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿವೆ. ಆದರೆ ಜನರು ಪ್ರಾಮಾಣಿಕವಾಗಿ ಸಹಕರಿಸಿದಾಗ ಮಾತ್ರ ಅವು ಯಶಸ್ವಿಯಾಗಲಿವೆ ಎಂದು ಅಭಿಪ್ರಾಯಪಟ್ಟರು. ಪ್ರಸ್ತ ಮಳೆಗಾಲದಲ್ಲಿ ನಡೆಯುತ್ತಿರುವ “ಮನೆ ಮನೆಗಳಲ್ಲಿ ಸಸ್ಯಾರೋಪಣ” ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಶಂಕರ್ ಕೆ. ಮಾತನಾಡಿ, ಕಾಲೇಜಿನಲ್ಲಿ ಹಸಿರೀಕರಣಕ್ಕೆ ಸಂಬಂಧಿಸಿದಂತೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಇತ್ತೀಚೆಗೆ ನಡೆದ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ 300 ಸಸಿಗಳನ್ನು ವಿದ್ಯಾರ್ಥಿಗಳಿಗೆ ಉಚಿತವಾಗಿ ವಿತರಿಸಲಾಗಿದೆ ಎಂದು ತಿಳಿಸಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ರಾಜಕುಮಾರ ಅಲ್ಲುರೆ ಮಾತನಾಡಿ, ರಾಷ್ಟ್ರೀಯ




ಸೇವಾ ಯೋಜನೆ (ಎನ್‌ಎಸ್‌ಎಸ್) ಸೇರಿದಂತೆ ವಿವಿಧ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸಲಾಗುತ್ತಿದೆ. ಕಾಲೇಜು ಆವರಣದ ಹಸಿರೀಕರಣಕ್ಕಾಗಿ ವಿಶೇಷ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಸಿಗಳಿಗೆ ಪೂಜೆ ಸಲ್ಲಿಸಿ, ಅಲಂಕಾರಿಕ ಸಸಿಗಳನ್ನು ನೆಡುವ ಮೂಲಕ ಪರಿಸರ ದಿನಾಚರಣೆಗೆ ಅರ್ಥಪೂರ್ಣ ಚಾಲನೆ ನೀಡಲಾಯಿತು.

ಹಿರಿಯ ಯೋಗ ಮೇಲ್ವಿಚಾರಕ ಗಂಗಪ್ಪ ಸಾವಳೆಯವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಂಜು ಶೀಲವಂತ ಸ್ವಾಗತ ಗೀತೆ ಹಾಡಿದರು. ಅಶೋಕ ಶೀಲವಂತ ಕಾರ್ಯಕ್ರಮ ನಿರೂಪಿಸಿದರು. ಮಲ್ಲಿಕಾರ್ಜುನ ಪಾಟೀಲ ಸ್ವಾಗತಿಸಿದರು. ನಿವೃತ್ತ ಮುಖ್ಯಗುರು ನಿಜಲಿಂಗಪ್ಪ ತಗಾರೆಯವರು ವಂದಿಸಿದರು. ಜ್ಞಾನೇಶ ಪಾಟೀಲ ಕಾರ್ಯಕ್ರಮದ ನಿರ್ವಹಣೆ ಮಾಡಿದರು.

ಈ ಸಂದರ್ಭದಲ್ಲಿ ರಮೇಶ ಕಪ್ಪಾಪುರ, ಶಿವರಾಜ ಬಿರಾದಾರ, ಶಂಕರ ಚಿದ್ರಿ, ಈಶ್ವರ ಕನ್ನೇರಿ, ರಾಚಯ್ಯ ಸ್ವಾಮಿ, ಪುಷ್ಪವತಿ, ಅರುಣಾ ಪಾಟೀಲ, ನೀಲಮ್ಮ ರೋಗನ ಸೇರಿದಂತೆ ಉದ್ಯಾನದ ಅನೇಕ ಯೋಗ ಸಾಧಕರು ಹಾಗೂ ಪರಿಸರ ಪ್ರೇಮಿಗಳು ಉಪಸ್ಥಿತರಿದ್ದರು.

# ಸ್ವಚ್ಛ ಕಲಬುರಗಿ ನಮ್ಮ ಕನಸು



**ಕಲಬುರಗಿ:** ನಮ್ಮ ಕಲಬುರಗಿ ನಗರದಲ್ಲಿ ಒಳಚರಂಡಿ ತುಂಬಿ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿದೆ. ಸರಕಾರಿ ಆಸ್ಪತ್ರೆ, ಬಸವೇಶ್ವರ ಆಸ್ಪತ್ರೆ ಎದುರು ರಸ್ತೆ ಸಂಪೂರ್ಣ ಹಾಳಾಗಿದೆ. ದತ್ತ ನಗರ ರೈಲ್ವೆ ಸೇತುವೆ ಕೆಳಗೆ, ಕೋಟೆ ಕಂದಕದ ಕೊಳಚೆ ನೀರಿನಲ್ಲಿ ಎಮ್ಮೆಗಳು ಈಜಾಡುತ್ತಿವೆ.

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ, ಪ್ರತಿ ಬಡಾವಣೆಯಲ್ಲಿ ಉದ್ಯಾನವನ ನಿರ್ಮಿಸಿ, ಗಿಡ ಬೆಳೆಸಬೇಕು. ಹಿರಿಯರಿಗೆ ವಾಯು ವಿಹಾರ, ಮಕ್ಕಳಿಗೆ ಆಟದ ಮೈದಾನ ಮಾಡಿಕೊಡಬೇಕು. ಶುದ್ಧ ಕುಡಿಯುವ ನೀರು, ಒಳ್ಳೆಯ ರಸ್ತೆ, ಪಾದಚಾರಿ ದಾರಿ, ಸಾರ್ವಜನಿಕ ಶೌಚಾಲಯ ಇವು ನಾಗರಿಕರ ಮೂಲಭೂತ ಹಕ್ಕು.

ಜೂನ್ 5 ವಿಶ್ವ ಪರಿಸರ ದಿನದ ಸಂಕಲ್ಪ: ಗಾಂಧೀಜಿಯವರ ಕನಸಿನಂತೆ “ಸ್ವಚ್ಛ ಭಾರತ  ಸ್ವಚ್ಛ ಕಲಬುರಗಿ” ನಿರ್ಮಿಸೋಣ. ಅಧಿಕಾರಿಗಳು ಹಾಗೂ ನಾಗರಿಕರೆಲ್ಲರೂ ಕೈಜೋಡಿಸೋಣ.

# ಕಂಪ್ಯೂಟರ್ ತರಬೇತಿ ಪಡೆದ ಕೈದಿಗಳಿಗೆ ಪ್ರಮಾಣ ಪತ್ರ ವಿತರಣೆ

**ಕಲಬುರಗಿ,ಜೂ.5:** ಕೇಂದ್ರ ಕಾರಾಗೃಹದಲ್ಲಿ ಉಚಿತ ಕಂಪ್ಯೂಟರ್ ತರಬೇತಿ ಪಡೆದಿರುವ ಕೈದಿಗಳಿಗೆ ಪ್ರಮಾಣ ಪತ್ರ ಮತ್ತು ನೂತನ ತರಬೇತಿದಾರರಿಗೆ ಕಿಟ್ ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಫಾದರ್ ವಿಲಿಯಂ ಮಿರಿಂಡಾ ಮಾತನಾಡುತ್ತಾ,ನೀವು ತರಬೇತಿಯನ್ನು ಪಡೆದು ಜೀವನಕ್ಕೆ ಒಂದು ಅಡಿಪಾಯ ಸಿಕ್ಕಂತೆ ಆಗುತ್ತದೆ. ನಿಮ್ಮ ಜೀವನವು ಹಸಿರುಮಯವಾಗಿ ಮುಂದಿನ ಬದುಕಿಗೆ ದಾರಿ ದೀಪವಾಗುತ್ತದೆಂದು ಎಂದು ಹೇಳಿದರು.



ಅತಿಥಿಗಳಾಗಿ ಆಗಮಿಸಿದ ಅದಾನಿ ಗ್ರೂಪ್ ಸಂಯೋಜಕ ಅಶೋಕ ಬಿ ಹಾಲವಿ, ಸಹಾಯಕ ಅಧೀಕ್ಷಕ ಬಿ. ಸುರೇಶ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮುಖ್ಯ ಅಧೀಕ್ಷಕ ರಾಕೇಶ ಕಾಂಬಳೆ , ಪ್ರಮಾಣ ಪತ್ರ ಹಾಗೂ ಕಿಟ್ ವಿತರಿಸಿ ಮಾತನಾಡುತ್ತಾ, ಕಾರಾಗೃಹದಲ್ಲಿರುವ ಎಲ್ಲಾ ಬಂದಿಗಳಿಗೆ ಸರದಿ ಪ್ರಕಾರವಾಗಿ ಕಂಪ್ಯೂಟರ್ ಶಿಕ್ಷಣ ನೀಡುವುದರ ಜೊತೆಗೆ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ಸಹ ನೀಡಲಾಗುತ್ತದೆ. ಪ್ರತಿಯೊಬ್ಬ ಬಂದಿಯು ವೃತ್ತಿಪರ ತರಬೇತಿಗಳನ್ನು ಪಡೆದು ಹಾಗೂ ತರಬೇತಿ ಪಡೆದಿರುವ ಬಂದಿಗಳಿಗೆ ವಿಶೇಷ ಮಾಫಿಯನ್ನು ನೀಡಲಾಗುವುದು ಅದರ ಉಪಯೋಗ ಪಡೆದುಕೊಂಡು ಈ ಕಾರಾಗೃಹದಿಂದ ಬಿಡುಗಡೆ ಹೊಂದಿ ಸಮಾಜದೊಂದಿಗೆ ಬೆರೆತು ಈ ಕಾರಾಗೃಹದಲ್ಲಿ ಪಡೆದಂತಹ ತರಬೇತಿಗಳನ್ನು ಅಳವಡಿಸಿಕೊಂಡು ತಮ್ಮ ಕುಟುಂಬ ಮತ್ತು ಸಮಾಜಕ್ಕೆ ಒಬ್ಬ ಒಳ್ಳೆಯ ನಾಗರೀಕನಾಗಿ ಬಾಳುವೆ ನಡೆಸಿ ಇನ್ನೊಬ್ಬರಿಗೆ ಮಾದರಿಯಾಗಿ ಬದುಕಬೇಕೆಂದು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ 30 ಜನ ತರಬೇತಿ ಪಡೆದ ಪ್ರಶಿಕ್ಷಣಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಹಾಗೂ 30 ಜನ ನೂತನ ಪ್ರಶಿಕ್ಷಣಾರ್ಥಿಗಳಿಗೆ ಕಿಟ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜೈಲರ್ ಶಾಮ ಬಿದರಿ ಹಾಗೂ ಫಾದರ್ ಮ್ಯಾಕ್ಸಿಂ ಫಾದರ್ ಸಿಬ್ಬಂದಿ ಮಂಜುನಾಥ ಹಾಗೂ ಕಂಪ್ಯೂಟರ್ ಶಿಕ್ಷಕ ಹರೀಶ್ ದತ್ತಾತ್ರೇಯ ಗೌಳಿ ಉಪಸ್ಥಿತರಿದ್ದರು.

ಈ ಕಾರಾಗೃಹದ ಬಂದಿ ಶಿವಶಂಕರ್ ಪ್ರಾರ್ಥನ ಗೀತೆಯನ್ನು ಹಾಡಿದರು. ಮುಖ್ಯ ವೀಕ್ಷಕ ಶ್ರೀಕಾಂತ್ ರಂಜೇರಿ ದೇಶಭಕ್ತಿ ಗೀತೆ ಹಾಡಿದರು. ಸಹಾಯಕ ಆಡಳಿತಾಧಿಕಾರಿ ಸ್ವಾಗತ ಭಾಷಣ ಮಾಡಿದರು. ಕಾರಾಗೃಹದ ಶಿಕ್ಷಕ ನಾಗರಾಜ ಮೂಲಗೆ ಕಾರ್ಯಕ್ರಮ ನಿರೂಪಣೆಯ ಜೊತೆಗೆ ವಂದಿಸಿದರು.

